ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು **ಪ್ರಥಮ ದರ್ಜೆಯ ನ್ಯಾಯಿಕ**
**ದಂಡಾಧಿಕಾರಿಗಳವರ ನ್ಯಾಯಾಲಯ ಬೈಲಹೊಂಗಲ**

**ಸಿ.ಸಿ. ನಂ. 1292/2023**

**ಚಾ.ಸಾ. - 1**
**ಪ್ರಾ.ಸಾ. - 1**

**ಸಾಕ್ಷಿದಾರರ ಹೆಸರು** : ಮಲಗೌಡ ನಿಂಗಪ್ಪ ಜಕ್ಕನಗೌಡರ

**ಸಾಕ್ಷಿದಾರರ ವಯಸ್ಸು** : **38** ವರ್ಷ

**ಸಾಕ್ಷಿದಾರರ ಉದ್ಯೋಗ** : ಶೇತ್ಕಿ

**ಸಾಕ್ಷಿದಾರರ ವಿಳಾಸ** : ಮರಡಿನಾಗಲಾಪೂರ

**ಪ್ರಮಾಣ ವಚನ ಮಾಡಿದ ದಿನಾಂಕ : 09.09.2024.**

**ಮುಖ್ಯ ವಿಚಾರಣೆ : ಎಪಿಪಿ ಅವರಿಂದ**

ಪೋಲಿಸರು ನನ್ನ ಸಮಕ್ಷಮ ಯಾವುದೇ ಅಬಕಾರಿ ದಾಳಿ ಮಾಡಿರುವುದಿಲ್ಲ. ಆರೋಪಿಯಿಂದ ಯಾವುದೇ ಸ್ವತ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ. ನಾನು ಮರಡಿನಾಗಲಾಪೂರಲಿದ್ದಾಗ ಪೋಲಿಸರು ಒಂದು ದಾಖಲೆಯ ಮೇಲೆ ನನ್ನ ಸಹಿಯನ್ನು ಪಡೆದುಕೊಂಡಿರುವರು. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿದ್ದು, ಸದರಿ ದಾಖಲೆ ಪಂಚನಾಮೆಯಾಗಿದ್ದು, ಸಾಕ್ಷಿ ಸದರಿ ದಾಖಲೆಯಲ್ಲಿರುವ ತನ್ನ ಸಹಿಯನ್ನು ಗುರುತಿಸಿದ್ದು ಅದನ್ನು ನಿಪಿ **1** ಎಂದು, ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿಪಿ **1** ಎ ಎಂದು ಗುರುತಿಸಲಾಯಿತು. ನಿಪಿ **1** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

(ಸಾಕ್ಷಿಯು ಅಭಿಯೋಜನ ಕೇಸಿಗೆ ವಿರುದ್ದವಾಗಿ ಸಾಕ್ಷಿ ನುಡಿದಿರುವ ಕಾರಣ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಬೇಕೆಂದು ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರು ಕೋರಿಕೊಂಡಿರುವರು . ಕಡತವನ್ನು ಪರಿಶೀಲಿಸಲಾಯಿತು. ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿರುವ ಕಾರಣ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು ).

**ಪಾಟೀ ಸವಾಲುಃ ಎಪಿಪಿ ವಕೀಲರಿಂದಃ**

ದಿಃ **30.07.2022** ರಂದು ಮರಡಿನಾಗಲಾಪೂರ ಗ್ರಾಮ ಪಂಚಾಯತಿ ಹತ್ತಿರ **12.00** ರಿಂದ **13.15** ರ ಅವಧಿಯಲ್ಲಿ ಪೋಲಿಸರು ನನ್ನ ಸಮಕ್ಷಮ ಅಬಕಾರಿ ದಾಳಿ ಮಾಡಿ ಆರೋಪಿಯಿಂದ ಮದ್ಯದ ಟೆಟ್ರಾ ಪೌಚಗಳನ್ನು ವಶಪಡಿಸಿಕೊಂಡು ಸ್ಥಳದಲ್ಲಿ ಪಂಚನಾಮೆ ಬರೆದು ನನ್ನ ಸಹಿಯನ್ನು ಪಡೆದುಕೊಂಡಿರವರು ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದ ಃ ಇಲ್ಲ

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/-

ಪ್ರ.ದಿ.ನ್ಯಾ. ಮತ್ತು ಪ್ರ.ದ.ನ್ಯಾ.ದಂ.ನ್ಯಾ.ಬೈಲಹೊಂಗಲ